ಅ) ಹೌದು

ಆ) ಪ್ರಾಥಮಿಕ ಶಾಲೆಗಳಲ್ಲಿ ಒಟ್ಟು 46 ಶಿಕ್ಷಕರ ಕೊರತೆ ಇದೆ. ಪ್ರೌಢಶಾಲೆಗಳಲ್ಲಿ ಒಟ್ಟು 13 ಶಿಕ್ಷಕರ ಕೊರತೆ ಇದೆ.

ಇ) ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿಗೆ ಸಂಬಂಧಿಸಿದಂತೆ ಅಂತಿಮ ಆಯ್ಕೆ ಪಟ್ಟಿಯನ್ನು ಈಗಾಗಲೇ ಪ್ರಕಟಿಸಲಾಗಿದ್ದು ಸದರಿ ಆಯ್ಕೆ ಪಟ್ಟಿಗೆ ಕರ್ನಾಟಕ ಆಡಳಿತ ಮಂಡಳಿಯು ತಡೆಯಾಜ್ಞೆ ನೀಡಿದೆ. ಸದರಿ ತಡೆಯಾಜ್ಞೆಯನ್ನು ತೆರವುಗೊಳಿಸಿದ ಕೂಡಲೇ ಹುದ್ದೆಗಳನ್ನು ತುಂಬಲು ತುರ್ತು ಕ್ರಮ ಕೈಗೊಳ್ಳಲಾಗುವುದು. ಪ್ರೌಢಶಾಲಾ ಸಹಶಿಕ್ಷಕರ ಹುದ್ದೆಗಳನ್ನು ಹೆಚ್ಚುವರಿ ಶಿಕ್ಷಕರಿರುವ ಶಾಲೆಗಳಿಂದ ಸ್ಥಳಾಂತರಿಸುವ ಮೂಲಕ ಹಾಗೂ ನೇರ ನೇಮಕಾತಿಯ ಮೂಲಕ ಕೊರತೆ ಇರುವ ಹುದ್ದೆಗಳನ್ನು ಭರ್ತಿ ಮಾಡಲಾಗುವುದು.

84 (115) - ಶ್ರೀ ಶಂಕರಲಿಂಗೇಗೌಡ ಹೆಚ್.ಎಸ್. (ಚಾಮರಾಜ) : ಮಾನ್ಯ ರಾಜ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿ ಆರಂಭಿಸಿರುವುದನ್ನು ಇನ್ನೂ ಪೂರ್ಣಗೊಳಿಸದಿರುವುದಕ್ಕೆ ಕಾರಣಗಳೇನು?

ಆ) ಈ ನೇಮಕಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸುವ ವಿಚಾರವನ್ನು ಸರ್ಕಾರ ಇದುವರೆವಿಗೆ ಕೈಗೊಂಡಿರುವ ಕ್ರಮಗಳೇನು?

ಇ) ಈ ಕುರಿತು ಫಲಿತಾಂಶವನ್ನು ಯಾವಾಗ ನೀಡಬಹುದು?

ಪೊ।। ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :

ಅ) ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ಈಗಾಗಲೇ ಆಯ್ಕೆಗೊಂಡ ಅಭ್ಯರ್ಥಿಗಳ ತಾತ್ಕಾಲಿಕ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿದೆ. ಈ ಪಟ್ಟಿಯನ್ನು ಪ್ರಶ್ನಿಸಿ ಪ್ರಕಟಿಸಲಾಗಿದೆ. ಈ ಪಟ್ಟಿಯನ್ನು ಪ್ರಶ್ನಿಸಿ ಕೆಲವು ಆಯ್ಕೆಗೊಳ್ಳದ ಅಭ್ಯರ್ಥಿಗಳು ಕೆಎಟಿ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಿದ್ದು, ನ್ಯಾಯಾಲಯದ ತಡೆಯಾಜ್ಞೆ ಇರುವುದರಿಂದ ಪೂರ್ಣಗೊಳಿಸಲಾಗಿಲ್ಲ.

ಆ) ನೇಮಕಾತಿ ಪ್ರಕ್ರಿಯೆ ಪೂರ್ಣಗೊಳಿಸಲು ನ್ಯಾಯಾಲಯದ ತಡೆಯಾಜ್ಞೆ ತೆರವುಗೊಳಿಸಲು ಅಗತ್ಯ ಕ್ರಮ ತೆಗೆದುಕೊಂಡಿದ್ದು ವಿಚಾರಣೆಯು ಮುಗಿದಿದ್ದು, ನ್ಯಾಯಾಲಯದ ತೀರ್ಪಿಗಾಗಿ ಕಾರ್ಯಲಾಗಿದೆ.

ಇ) ನ್ಯಾಯಾಲಯದ ಅಂತಿಮ ತೀರ್ಪು ಹೊರಬಿದ್ದೊಡನೆ ಮುಂದಿನ ಕ್ರಮ ಕೈಗೊಳ್ಳಲಾಗುವುದು.

ಮೂಲಭೂತ ಸೌಕರ್ಯಗಳ ಕೊರತೆಯಿಂದಾಗಿ ರಾಜ್ಯದಲ್ಲಿನ ಕಾಲೇಜುಗಳನ್ನು ಮುಚ್ಚುವ ಬಗ್ಗೆ

87 (104) : ಶ್ರೀ ಯೋಗೀಶ್ ಭಟ್ ಎನ್ (ಮಂಗಳೂರು) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?